ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2018–19 ದಿನಾಂಕ: 13–07–2018

# ಪತ್ರಿಕಾ ಆಮಂತ್ರಣ

1. **ಪತ್ರಿಕಾಗೋಷ್ಠಿ:**
   **ಸರಕು ಮತ್ತು ಸೇವಾ ತೆರಿಗೆ ಸಭೆಯ ನಂತರ:**

   **ಸುಶೀಲ್ ಕುಮಾರ್ ಮೋದಿ,**
   **ಉಪ ಮುಖ್ಯಮಂತ್ರಿ,**
   **ಬಿಹಾರ ರಾಜ್ಯ**

   **ದಿನಾಂಕ: 14–07–2018 ಶನಿವಾರ, ಸಮಯ: ಮಧ್ಯಾಹ್ನ 2.00 ಗಂಟೆಗೆ.**
   **ಸ್ಥಳ: ಐ.ಟಿ.ಸಿ. ವಿಂಡ್ಸರ್, ಹೊಟೇಲ್‌ನ ವೆಸ್ಟ್ ಮಿನಿಸ್ಟರ್ ಬ್ಯಾಂಕ್ವೆಟ್ ಹಾಲ್, ಬೆಂಗಳೂರು.**

2. **ಕರ್ನಾಟಕ ಚಲನಚಿತ್ರ ಅಕಾಡೆಮಿಯ 'ಬೆಳ್ಳಿ ಹೆಜ್ಜೆ' ಕಾರ್ಯಕ್ರಮ:**

   **ಮುಖ್ಯ ಅತಿಥಿಗಳು:**
   **ಸಾಯಿಪ್ರಕಾಶ್, ನಿರ್ದೇಶಕರು.**

   **ದಿನಾಂಕ: 14–07–2018 ಶನಿವಾರ, ಸಮಯ: ಸಂಜೆ 5.00 ಗಂಟೆಗೆ.**

   **ಸ್ಥಳ: ಮಹದೇವ ದೇಸಾಯಿ ಸಭಾಂಗಣ, ಗಾಂಧಿ ಭವನ, ಕುಮಾರಪಾರ್ಕ್ ರಸ್ತೆ, ಬೆಂಗಳೂರು.**

ಸಂಖ್ಯೆ659/759

ಪತ್ರಿಕಾ ಪ್ರಕಟಣೆ

# ರಾಜ್ಯದಲ್ಲಿ ಮಾದಕ ದ್ರವ್ಯ ಜಾಲ ನಿಯಂತ್ರಣಕ್ಕೆ ಕಠಿಣ ಕ್ರಮ

ಬೆಂಗಳೂರು, ಜುಲೈ 13 (ಕರ್ನಾಟಕ ಸರ್ಕಾರ)

ರಾಜ್ಯದಲ್ಲಿ ಮಾದಕ ದ್ರವ್ಯ ಜಾಲ ನಿಯಂತ್ರಣಕ್ಕೆ ಕಠಿಣ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಮಾದಕ ದ್ರವ್ಯ ಸರಬರಾಜುದಾರರ ವಿರುದ್ಧ ಗೂಂಡಾ ಕಾಯ್ದೆ ಜಾರಿಗೊಳಿಸಲು ಸರ್ಕಾರ ಸಿದ್ಧವಿದೆ ಎಂದು ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರು ತಿಳಿಸಿದರು.

ಇತ್ತೀಚೆಗೆ ರಾಜ್ಯದಲ್ಲಿ ಮಾದಕ ದ್ರವ್ಯ ಜಾಲ ಅತ್ಯಂತ ಬಲಿಷ್ಠವಾಗಿ ಬೆಳೆದಿದ್ದು ಶಾಲಾ ಹಾಗೂ ಕಾಲೇಜು ವಿದ್ಯಾರ್ಥಿಗಳು ಈ ಜಾಲಕ್ಕೆ ಬಲಿಯಾಗುತ್ತಿದ್ದಾರೆ ಎಂದು ಚರ್ಚೆ ಆರಂಭಿಸಿದ ವಿರೋಧ ಪಕ್ಷದ ಸದಸ್ಯರುಗಳ ಅಭಿಪ್ರಾಯಗಳ ನಂತರ ಸರ್ಕಾರದ ಪರವಾಗಿ ಮಾತನಾಡಿದ ಸಚಿವರು ಮಾದಕ ದ್ರವ್ಯ ಸಮಸ್ಯೆಗೆ ಪರಿಹಾರವನ್ನು ಕಂಡುಕೊಳ್ಳಲು ಸರ್ಕಾರ ಈಗಾಗಲೇ ಪ್ರತಿ ಠಾಣೆಯಲ್ಲಿ ನಾರ್ಕೋ ಅನಾಲಿಸಿಸ್ ಪ್ರತ್ಯೇಕ ವಿಭಾಗಗಳನ್ನು ತೆರೆದಿದೆ.

ಪೊಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಆಯಾ ಜಿಲ್ಲಾ ವ್ಯಾಪ್ತಿಗಳಲ್ಲಿ ಈ ಜಾಲಗಳ ಬಗ್ಗೆ ತನಿಖೆ ನಡೆಸಿ ಕಠಿಣ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ. ನಿಯಂತ್ರಣಕ್ಕಾಗಿ ಗೂಂಡಾ ಕಾಯ್ದೆಯನ್ನು ಸಹ ಬಳಸಲು ಕ್ರಮ ಕೈಗೊಳ್ಳಲಾಗುವುದು.

ಮಾದಕವಸ್ತುಗಳ ನಿಯಂತ್ರಣಕ್ಕಾಗಿ ಸರ್ಕಾರ ತರುವ ಕಾನೂನುಗಳ ಜೊತೆ ಸಮಾಜ ಸಹ ತನ್ನ ಜವಾಬ್ದಾರಿಯನ್ನು ಪ್ರದರ್ಶಿಸಬೇಕು. ಇತ್ತೀಚೆಗೆ ಬೆಂಗಳೂರಿನ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ರೂ. ಐದು ಕೋಟಿ ಬೆಲೆಯ ಮಾದಕ ದ್ರವ್ಯವನ್ನು ವಶಪಡಿಸಿಕೊಂಡಿದ್ದು, ವಿಮಾನ ನಿಲ್ದಾಣದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮನೆಗಳಲ್ಲಿಯೇ ಮಾತ್ರೆ ರೂಪದಲ್ಲಿ ಮಾದಕ ದ್ರವ್ಯಗಳನ್ನು ಮಾಡಲಾಗುತ್ತಿದೆ ಎಂಬ ಅಂಶ ಬೆಳಕಿಗೆ ಬಂದಿದ್ದು ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ತಿಳಿಸಿದರು.

ಮಾದಕದ್ರವ್ಯ ಸಮಸ್ಯೆ ರಾಜ್ಯದಲ್ಲಿರುವಂತೆ ದೇಶದಲ್ಲಿ ಸಹ ವ್ಯಾಪಕವಾಗಿ ಹರಡಿಕೊಂಡಿದೆ. ಈ ಕುರಿತು ಕೇಂದ್ರ ಸರ್ಕಾರ ಕಠಿಣ ಕಾನೂನನ್ನು ಜಾರಿಗೆ ತರುವ ಮೂಲಕ ಕ್ರಮಕ್ಕೆ ಮುಂದಾಗಬೇಕು ಹಾಗೂ ಈ ಕುರಿತು ದೇಶದಾದ್ಯಂತ ಚರ್ಚೆಯಾಗುವ ಅಗತ್ಯವಿದೆ.

ಕಲಾಪದ ನಂತರ ಆರೋಗ್ಯ ಇಲಾಖೆ, ಅಬಕಾರಿ, ಪೊಲೀಸ್ ಹಾಗೂ ಶಿಕ್ಷಣ ಇಲಾಖೆಗಳ ಸಭೆ ಕರೆದು ಚರ್ಚಿಸಲಾಗುವುದು. ಮಾದಕ ದ್ರವ್ಯ ಸರಬರಾಜು ಕುರಿತಂತೆ

ವಿದ್ಯಾಭ್ಯಾಸಕ್ಕಾಗಿ ರಾಜ್ಯಕ್ಕೆ ಆಗಮಿಸಿ ನೆಲೆಸಿರುವ ವಿದೇಶಿ ವಿದ್ಯಾರ್ಥಿಗಳ ಮೇಲೆ ಹೆಚ್ಚಿನ ನಿಗಾವಹಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸಂಖ್ಯೆ658/758

# ಅಧಿವೇಶನ ಮುಕ್ತಾಯ

ಬೆಂಗಳೂರು, ಜುಲೈ 13 (ಕರ್ನಾಟಕ ಸರ್ಕಾರ)

**ಜುಲೈ 2 ರಿಂದ ಆರಂಭವಾಗಿದ್ದ 15ನೇ ವಿಧಾನಸಭೆಯ ಮೊದಲ ಅಧಿವೇಶನದ ಎರಡನೇ ಮುಂದುವರೆದ ಉಪವೇಶನವು ಜುಲೈ 13 ರಂದು ಕೊನೆಗೊಂಡು ಅನಿರ್ಧಿಷ್ಟಾವಧಿಗೆ ಮುಂದೂಡಲಾಯಿತು. ಒಟ್ಟು 12 ದಿನಗಳ ಕಾಲ ನಡೆದ ಅಧಿವೇಶನದಲ್ಲಿ 53 ಗಂಟೆ 5 ನಿಮಿಷಗಳ ಕಾಲ ಕಾರ್ಯ ಕಲಾಪಗಳು ನಡೆದು ಒಟ್ಟು ಐದು ವಿಧೇಯಕಗಳನ್ನು ಮಂಡಿಸಿ ಅಂಗೀಕರಿಸಲಾಯಿತು.**

**ಉಭಯ ಸದನಗಳನ್ನು ರಾಜ್ಯಪಾಲರು ಉದ್ದೇಶಿಸಿ ಭಾಷಣ ಮಾಡುವ ಮೂಲಕ ಆರಂಭವಾದ ಅಧಿವೇಶನದಲ್ಲಿ ರಾಜ್ಯಪಾಲರ ಭಾಷಣದ ಮೇಲೆ ವಂದನಾ ನಿರ್ಣಯ ಪ್ರಸ್ತಾವದಲ್ಲಿ 16 ಗಂಟೆ 20 ನಿಮಿಷಗಳ ಕಾಲ ಚರ್ಚೆ ನಡೆಸಲಾಯಿತು.**

**2018-19 ರ ಸಾಲಿನ ಆಯವ್ಯಯವನ್ನು ಕಳೆದ ಸರ್ಕಾರದಲ್ಲಿ ಫೆಬ್ರವರಿ ತಿಂಗಳಲ್ಲಿ ಮಂಡಿಸಿದ್ದ ಮುಂದುವರೆದ ಹೆಚ್ಚಿನ ಆಯವ್ಯಯವನ್ನು ಜುಲೈ 5 ರಂದು ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರು ಮಂಡಿಸಿದರು. ಆಯವ್ಯಯಗಳ ಅಂದಾಜುಗಳ ಮೇಲೆ ಒಟ್ಟು 16 ಗಂಟೆ 16 ನಿಮಿಷಗಳ ಕಾಲ ಚರ್ಚೆಯಾಯಿತು.**

**ಈ ಅವಧಿಯಲ್ಲಿ ಒಟ್ಟು 747 ಪ್ರಶ್ನೆಗಳನ್ನು ಸ್ವೀಕರಿಸಲಾಗಿದ್ದು, ಅದರಲ್ಲಿ 715 ಪ್ರಶ್ನೆಗಳನ್ನು ಅಂಗೀಕರಿಸಲಾಗಿದೆ. ಸದನದಲ್ಲಿ ಉತ್ತರಿಸುವ 60 ಪ್ರಶ್ನೆಗಳ ಪೈಕಿ 27 ಪ್ರಶ್ನೆಗಳನ್ನು ಚರ್ಚಿಸಲಾಗಿದೆ. 29 ಪ್ರಶ್ನೆಗಳ ಉತ್ತರಗಳನ್ನು ಸದನದಲ್ಲಿ ಮಂಡಿಸಲಾಗಿದೆ. ಲಿಖಿತ ಮೂಲಕ ಉತ್ತರಿಸುವ 646 ಪ್ರಶ್ನೆಗಳ ಪೈಕಿ 537 ಪ್ರಶ್ನೆಗಳಿಗೆ ಉತ್ತರಗಳನ್ನು ಮಂಡಿಸಲಾಗಿದೆ.**

**ನಿಯಮ 73 ರ ಮೇರೆಗೆ ಸ್ವೀಕರಿಸಲಾಗಿರುವ ಒಟ್ಟು 123 ಸೂಚನಾ ಪತ್ರಗಳ ಪೈಕಿ 73 ಸೂಚನೆಗಳಿಗೆ ಉತ್ತರವನ್ನು ಸ್ವೀಕರಿಸಲಾಗಿದೆ. 10 ಸೂಚನೆಗಳ ಬಗ್ಗೆ ಸದನದಲ್ಲಿ ಚರ್ಚಿಸಲಾಗಿದೆ ಹಾಗೂ 28 ಸೂಚನೆಗಳ ಉತ್ತರಗಳನ್ನು ಮಂಡಿಸಲಾಗಿದೆ.**

**ನಿಯಮ 351 ರಡಿಯಲ್ಲಿ ಒಟ್ಟು 58 ಸೂಚನೆಗಳು ಅಂಗೀಕೃತಗೊಂಡಿದ್ದು, 32 ಸೂಚನೆಗಳಿಗೆ ಸರ್ಕಾರದಿಂದ ಉತ್ತರಗಳನ್ನು ಸ್ವೀಕರಿಸಲಾಗಿರುತ್ತದೆ ಎಂದು ಸಭಾಧ್ಯಕ್ಷರು ಸದನಕ್ಕೆ ತಿಳಿಸಿದರು.**

ಸಂಖ್ಯೆ659/759

# ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

ಬೆಂಗಳೂರು, ಜುಲೈ 13 (ಕರ್ನಾಟಕ ಸರ್ಕಾರ)

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಭಾರತೀಯ ಸೇನೆಗೆ ಸೇರ ಬಯಸುವ ರಾಜ್ಯದ ಹಿಂದುಳಿದ ವರ್ಗಗಳ ಅರ್ಹ ಅಭ್ಯರ್ಥಿಗಳಿಗೆ ಆಯ್ಕೆ ಪೂರ್ವಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಮತ್ತು ತರಬೇತಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

ತರಬೇತಿ ಸಮಯದಲ್ಲಿ ಉಚಿತ ಊಟ ಮತ್ತು ವಸತಿ ಸೌಲಭ್ಯದೊಂದಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು 2018-19ನೇ ಸಾಲಿಗೆ ನೀಡುತ್ತಿದ್ದು, ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-I 2(ಎ), 3 3(ಎ) ಹಾಗೂ 3(ಬಿ) ಗಳಿಗೆ ಸೇರಿದ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 25-07-2018 ಆಗಿದ್ದು, ಹೆಚ್ಚಿನ ವಿವರಗಳಿಗಾಗಿ ಇಲಾಖೆ ವೆಬ್‌ಸೈಟ್ www.backwardclasses.kar.nic.in ನ್ನು ವೀಕ್ಷಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಆಯುಕ್ತರ ಕಚೇರಿ, ನಂ 16-ಡಿ, 3ನೇ ಮಹಡಿ, ಡಿ. ದೇವರಾಜ ಅರಸು ಭವ ನ, ವಿಲ್ಲರ್ಸ್ ಕೆರೆ ಅಂಗಳ, ವಸಂತನಗರ, ಬೆಂಗಳೂರು – 560 052 ರ ಸಹಾಯವಾಣಿ ಸಂಖ್ಯೆ 8050770004ನ್ನು ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 5.30 ರವರೆಗೆ, ಸಾರ್ವಜನಿಕರ ರಜೆ ಹೊರತುಪಡಿಸಿ ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಸಂಖ್ಯೆ660/760

# ತಾಂತ್ರಿಕ/ತಾಂತ್ರಿಕೇತರ ಹುದ್ದೆಗಳ ನೇಮಕಾತಿಗಾಗಿ ಸಂದರ್ಶನ

ಬೆಂಗಳೂರು, ಜುಲೈ 13 (ಕರ್ನಾಟಕ ಸರ್ಕಾರ)

ಕರ್ನಾಟಕ ಲೋಕಸೇವಾ ಆಯೋಗವು ವಿವಿಧ ಇಲಾಖೆಯಲ್ಲಿನ ಗ್ರೂಪ್–ಎ ಮತ್ತು ಬಿ ತಾಂತ್ರಿಕ/ತಾಂತ್ರಿಕೇತರ ಹುದ್ದೆಗಳ ನೇಮಕಾತಿಗಾಗಿ ಆಯೋಗದ ಕೇಂದ್ರ ಕಚೇರಿ, ಬೆಂಗಳೂರು ಇಲ್ಲಿ ಆಯಾ ಹುದ್ದೆಗಳ ಸಂದರ್ಶನವನ್ನು ನಡೆಸಲಿದೆ.

ಜುಲೈ 16 ರಿಂದ 18 ರವರೆಗೆ ಗಣಿ ಮತ್ತು ಭೂವಿಜ್ಞಾನ ಇಲಾಖೆಯಲ್ಲಿನ ಭೂವಿಜ್ಞಾನಿ – 97 +40 (ಹೈ.ಕ) ಹುದ್ದೆಗಳು, ಜುಲೈ 19 ರಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು 52 ಹುದ್ದೆಗಳು ಮತ್ತು ಅಧೀಕ್ಷಕರು ದರ್ಜೆ –1 ರ ಹುದ್ದೆಗಳು ಹಾಗೂ ಜುಲೈ 20 ರಂದು ಔಧ ನಿಯಂತ್ರಣ ಇಲಾಖೆಯಲ್ಲಿನ ಜೂನಿಯರ್ ಸೈಂಟಿಫಿಕ್ ಆಫೀಸರ್ 33 (07+01 ಬ್ಯಾಲಾ+25) ಹುದ್ದೆಗಳಿಗೆ ಸಂದರ್ಶನ ನಡೆಯಲಿದೆ.

ಅಭ್ಯರ್ಥಿಗಳಿಗೆ ಸಂದರ್ಶನ ಸೂಚನಾ ಪತ್ರಗಳನ್ನು ಈಗಾಗಲೇ ಕಳುಹಿಸಲಾಗಿದ್ದು, ಸಂದರ್ಶನದ ಅಭ್ಯರ್ಥಿಗಳ ಪಟ್ಟಿಗಳನ್ನು ಮಾಹಿತಿಗಾಗಿ ಆಯೋಗದ ವೆಬ್‌ಸೈಟ್ "http://kpsc.kar.nic.in/Eligibility List" ನಲ್ಲಿ ಪ್ರಕಟಿಸಲಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಸಂಖ್ಯೆ661/761

# ಕಬ್ಬನ್ ಉದ್ಯಾನದಲ್ಲಿ ಈ ಭಾನುವಾರ

ಬೆಂಗಳೂರು, ಜುಲೈ 13 (ಕರ್ನಾಟಕ ಸರ್ಕಾರ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 15-07-2018 ರ** ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ

ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**I ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ **ನಿಹಾರಿಕಾ ತಂಡದವರಿಂದ ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಸಂಖ್ಯೆ661/761

## ಎಸಿಬಿ ದಾಳಿ

ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)

ಇಂದು ಭ್ರಷ್ಟಾಚಾರ ನಿಗ್ರಹ ದಳವು ಶ್ರೀ.ಎಂ.ಸಿ.ಶ್ರೀನಿವಾಸ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆ.ಹೆಚ್.ಎಸ್.ಡಿ.ಆರ್.ಪಿ ಸರ್ಕಾರಿ ಆಸ್ಪತ್ರೆ, ತುಮಕೂರು ಎಂಬುವವರು ತಮ್ಮ ಬಲ್ಲ ಮೂಲಗಳಿಂದ ಅಸಮತೋಲನ ಆಸ್ತಿ-ಪಾಸ್ತಿಗಳನ್ನು ಹೊಂದಿರುವ ಬಗ್ಗೆ ವಿಶ್ವಾಸಾರ್ಹ ಮಾಹಿತಿ ಸಂಗ್ರಹಿಸಿ ಅಕ್ರಮ ಆಸ್ತಿ ಗಳಿಕೆ ಪ್ರಕರಣಗಳನ್ನು ದಾಖಲಿಸಿ ಅವರು ವಾಸಿಸುತ್ತಿರುವ ಅಶೋಕನಗರ, ತುಮಕೂರು ನಿವಾಸ ಮತ್ತು ಎಂ ಹೆಚ್ ಪಟ್ಟಣ, ಗುಬ್ಬಿ ತಾಲ್ಲೂಕಿನ ತೋಟದ ಮನೆ ಮತ್ತು ಇವರು ಕರ್ತವ್ಯ ನಿರ್ವಹಿಸುತ್ತಿರುವ ಕೆ.ಹೆಚ್.ಎಸ್.ಡಿ.ಆರ್.ಪಿ ಸರ್ಕಾರಿ ಆಸ್ಪತ್ರೆ ಕಛೇರಿ ತುಮಕೂರು ಮೇಲೆ ದಾಳಿ ನಡೆಸಲಾಗಿರುತ್ತದೆ.

ಎಸಿಬಿ ತುಮಕೂರು ಠಾಣೆ ತಂಡಗಳಿಂದ ಮೇಲ್ಕಂಡ ಆರೋಪಿತ ಸರ್ಕಾರಿ ನೌಕರರ ವಿರುದ್ದ ದಾಳಿ ಮುಂದುವರೆದಿದ್ದು, ಸದರಿ ಸರ್ಕಾರಿ ನೌಕರರು ಹೊಂದಿರುವ ಆಸ್ತಿ-ಪಾಸ್ತಿಗಳ ಮೂಲದ ಬಗ್ಗೆ ತನಿಖೆ ಮುಂದುವರೆದಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಸಂಖ್ಯೆ662/762
ಸಂಖ್ಯೆ661/761

# ACB Raid

Bengaluru, July 13(Karnataka Information)

Today ACB has conducted raids over the properties of Shri. M.C Srinivas, Assistant Executive Engineer, K H S D R P Government Hospital Tumkur district who is belived to have amassed disproportionate assets beyond his known sources of income.

Raids were conducted at his Ashoknagar Tumkur residence, Farm house in M H Patna, Gubbi taluk and K H S D R P Government Hospital office at Tumkur district.

A Case against the official mentioned above is registered at Tumkuru ACB police station. Search and verification of properties by the ACB teams is continued to find out the source of income and other possible places for the search says official press release.

ಸಂಖ್ಯೆ662/762

# ಎಸಿಬಿ ದಾಳಿ

ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)

ದಿನಾಂಕ: 12/07/2018 ರಂದು ಭ್ರಷ್ಟಾಚಾರ ನಿಗ್ರಹ ದಳವು ಶ್ರೀ **ಶಿವಾನಂದ ಹನುಮಪ್ಪ ರಡ್ಡೇರ, ಕಾರ್ಯ ನಿರ್ವಾಹಕ ಅಭಿಯಂತರು, ಗ್ರಾಮೀಣ ನೀರು ಸರಬರಾಜು ಹಾಗೂ ನೈರ್ಮಲೀಕರಣ, ರೋಣ ಉಪವಿಭಾಗ** ಎಂಬುವವರು ತಮ್ಮ ಆದಾಯಕ್ಕಿಂತ ಹೆಚ್ಚು ಅಸಮತೋಲನ ಆಸ್ತಿ–ಪಾಸ್ತಿಗಳನ್ನು ಹೊಂದಿರುವ ಬಗ್ಗೆ  ವಿಶ್ವಾಸಾರ್ಹ ಮಾಹಿತಿ ಸಂಗ್ರಹಿಸಿ, ಅಕ್ರಮ ಆಸ್ತಿಗಳಿಕೆ ಪ್ರಕರಣವನ್ನು ದಾಖಲಿಸಿ ಅವರು ವಾಸಿಸುತ್ತಿರುವ **ಸಂಶಿದಿಬ್ಬ, ರೋಣದಲ್ಲಿರುವ ವಾಸದ ಮನೆ ಮತ್ತು ಇವರು ಕರ್ತವ್ಯ ನಿರ್ವಹಿಸುತ್ತಿರುವ ಕಚೇರಿ** ಮೇಲೆ ದಾಳಿ ನಡೆಸಲಾಗಿರುತ್ತದೆ. ಶೋಧನಾ ಕಾರ್ಯವು ಮುಂದುವರೆದಿದ್ದು ಈವರಗೆ ಶೋಧನೆ ನಡೆಸಲಾದ ಸ್ಥಳಗಳಲ್ಲಿ ಪತ್ತೆಯಾದ ಆರೋಪಿತ ಸರ್ಕಾರಿ ನೌಕರನ ಚರ ಮತ್ತು ಸ್ಥಿರ ಆಸ್ತಿಗಳ ವಿವರ ಈ ಕೆಳಕಂಡಂತೆ ಇರುತ್ತವೆ.

**ರೋಣ ಪಟ್ಟಣದಲ್ಲಿ ಒಟ್ಟು 6 ವಾಸದ ಮನೆಗಳು, 8 ನಿವೇಶನಗಳು, ಗದಗ ನಗರದಲ್ಲಿ 1 ನಿವೇಶನ ಮತ್ತು ಚಿನ್ನ 126 ಗ್ರಾಂ, ಬೆಳ್ಳಿ 391 ಗ್ರಾಂ, ಒಂದು ಸ್ವಿಫ್ಟ್ ಡಿಜೈರ್ ಕಾರು, 2 ದ್ವಿಚಕ್ರ ವಾಹನಗಳು,  ₹ 1.83 ಲಕ್ಷ ನಗದು ಹಣ ಹಾಗೂ  ₹ 6 ಲಕ್ಷ ಮೌಲ್ಯದ ಗೃಹೋಪಹಯೋಗಿ ವಸ್ತುಗಳು ಕಂಡು ಬಂದಿರುತ್ತದೆ.**

ತನಿಖೆ ಮುಂದುವರೆದಿದ್ದು, ಆರೋಪಿತ ಸರ್ಕಾರಿ ನೌಕರನು ಹೊಂದಿರುವ ಆಸ್ತಿ ಪಾಸ್ತಿಗಳ ಮೂಲದ ಬಗ್ಗೆ ತನಿಖೆ, ದಾಖಲೆಗಳ ಪರಿಶೀಲನಾ ಕಾರ್ಯ ಹಾಗೂ ಸಂಭಂದಪಟ್ಟ ಇನ್ನು ಹೆಚ್ಚಿನ ಸ್ಥಳಗಳ ಮಾಹಿತಿ ಸಂಗ್ರಹಣೆ ಮುಂದುವರೆದಿದೆ.

ಸಂಖ್ಯೆ663/763

# ACB Raid

Bengaluru, July 13(Karnataka Information)

On 12.07.2018 ACB has conducted raids over the properties of **Sri Shivanand Hanumappa Raddar, Assistant Executive Engineer, Rural Water Supply and Sanitation, Ron Sub-Division**, who is believed to have amassed disproportionate assets beyond his known sources of Income. His place of residence at Sanshidibba, Ron and Office of the AEE, Rural Water supply and Sanitation, Ron Sub-Division, Taluka  Panchayat premises at Ron are being searched by Gadag ACB team. Details of  the properties indentified during the raids are as follows.

**6 Residential houses & 8 plots in Ron Town, 1 plot in Gadag City, 126 gms Gold, 391 gms Silver, 1 Swift D Zire car, 2 Two wheeler, ₹ 1.83 Lakhs Cash and ₹ 6 lakhs worth household items were found.**

Investigation is continued and efforts are being put to find out the source of income and other possible places for the search says official press release.